# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಕರ್ನಾಟಕ ಸಾಮಾನ್ಯ ಸೇವೆ(ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಆಡಳಿತ ಶಾಖೆ) ಗೆ ಸೇರಿದ ಉಪ ಕಾರ್ಯದರ್ಶಿ(ಹಿರಿಯ ಶ್ರೇಣಿ) ಅಧಿಕಾರಿಯಾದ ಶ್ರೀ ರಾಮಕೃಷ್ಣ, ಇವರ ಅಮಾನತ್ತನ್ನು ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸುವ ಬಗ್ಗೆ.

ಓದಲಾಗಿದೆ:- 1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 92 ಪಬವ 2015 ದಿನಾಂಕ: 7-4-2015.

2) ಅರ್ಜಿ ಸಂಖ್ಯೆ: 4797/2015 ರಲ್ಲಿ ಮಾನ್ಯ ಕೆ.ಎ.ಟಿ.ಯ ಆದೇಶ ದಿನಾಂಕ 27-7-2015.

3) ಅಧಿಕಾರಿಯ ಮನವಿ ದಿನಾಂಕ 31-7-2015.

-*-

ಪ್ರಸ್ತಾವನೆ:-

ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ವಿವಿಧ ಯೋಜನೆಗಳಡಿ ಬಿಡುಗಡೆ ಮಾಡಿದ ಅಭಿವೃದ್ಧಿ ಕಾರ್ಯಗಳಿಗೆ ಬಳಕೆಯಾಗಬೇಕಾದ ನೂರಾರು ಕೋಟಿ ರೂ.ಗಳನ್ನು ಕೆಲ ಬ್ಯಾಂಕುಗಳಲ್ಲಿ ಠೇವಣಿ ಮಾಡಿ ಗಂಭೀರ ಸ್ವರೂಪದ ಹಣಕಾಸಿನ ಅಶಿಸ್ತು ಎಸಗಿರುವ ಬಗ್ಗೆ, ಕರ್ನಾಟಕ ಆರ್ಥಿಕ ಸಂಹಿತೆ 1958ರ **Cannons of Financial propriety** ಗಳನ್ನು ಉಲ್ಲಂಘಿಸಿ 4 ವರ್ಷಗಳಿಂದ ರೂ.134.00 ಕೋಟಿಗಳಷ್ಟು ಹಣವನ್ನು ಆಂಧ್ರ ಬ್ಯಾಂಕ್ ಖಾತೆಯಲ್ಲಿ ಇಟ್ಟು, ಗಂಭೀರ ಸ್ವರೂಪದ ಕರ್ತವ್ಯಲೋಪ/ದುರ್ನಡತೆ ಮತ್ತು ಆರ್ಥಿಕ ಅಶಿಸ್ತು ಎಸಗಿದ್ದುದು ಮೇಲ್ನೋಟಕ್ಕೆ ಕಂಡು ಬಂದಿದ್ದರ ಹಿನ್ನೆಲೆಯಲ್ಲಿ, ಸರ್ಕಾರವು ಮೇಲೆ ಓದಲಾದ ಕ್ರಮಸಂಖ್ಯೆ: (1)ರ ಆದೇಶದಲ್ಲಿ ಶ್ರೀ ರಾಮಕೃಷ್ಣ, ಉಪ ಕಾರ್ಯದರ್ಶಿ (ಗ್ರಾ.ನೀ.ಸ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ವಿರುದ್ಧದ ಇಲಾಖಾ ವಿಚಾರಣೆಯನ್ನು ಬಾಕಿಯಿರಿಸಿ, ಸೇವೆಯಿಂದ ಅಮಾನತ್ತುಪಡಿಸಲಾಗಿತ್ತು.

ಸದರಿ ಆದೇಶವನ್ನು ಪ್ರಶ್ನಿಸಿ, ಶ್ರೀ ರಾಮಕೃಷ್ಣ, ಇವರು ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಅರ್ಜಿ ಸಂಖ್ಯೆ: 4797/2015 ದಾಖಲಿಸಿದ್ದು, ಮಾನ್ಯ ನ್ಯಾಯ ಮಂಡಳಿಯು ದಿನಾಂಕ 27-7-2015 ರಂದು ಸದರಿ ಅರ್ಜಿಗೆ ಸಂಬಂಧಿಸಿದಂತೆ ನೀಡಿದ ಅಂತಿಮ ಆದೇಶದಲ್ಲಿ, ಸದರಿ ಅಧಿಕಾರಿಯನ್ನು ಅಮಾನತ್ತುಪಡಿಸಿದ 3 ತಿಂಗಳೊಳಗಾಗಿ ದೋಷಾರೋಪಣಾ ಪಟ್ಟಿಯನ್ನು ಜಾರಿ ಮಾಡಿಲ್ಲವಾದ ಕಾರಣ, ಅವರ ವಿರುದ್ಧ ನಿಯಮಾನುಸಾರ ಶಿಸ್ತುಕ್ರಮವನ್ನು ಜರುಗಿಸುವ ಅಧಿಕಾರವನ್ನು ಪ್ರತಿವಾದಿಗಳಿಗೆ ನೀಡುತ್ತಾ, ಅಧಿಕಾರಿಯನ್ನು ಅಮಾನತ್ತುಪಡಿಸಿದ ದಿನಾಂಕ 7-4-2015 ರ ಸರ್ಕಾರಿ ಆದೇಶವನ್ನು ತಕ್ಷಣದಿಂದ ರದ್ದುಪಡಿಸಿರುತ್ತದೆ.

ಶ್ರೀ ರಾಮಕೃಷ್ಣ, ಇವರು ಮೇಲೆ ಓದಲಾದ ದಿನಾಂಕ 31-7-2015 ರ ಮನವಿಯ ಜೊತೆ ದಿನಾಂಕ 27-7-2015 ರ ಮಾನ್ಯ ಕೆ.ಎ.ಟಿ.ಯ ಆದೇಶವನ್ನು ಉಲ್ಲೇಖಿಸುತ್ತಾ, ತಮ್ಮನ್ನು ಸೇವೆಗೆ ಪುನರ್ ಸ್ಥಾಪಿಸಿ, ಸ್ಥಳನಿಯುಕ್ತಿಗೊಳಿಸಲು ಕೋರಿರುತ್ತಾರೆ.

ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯಲ್ಲಿ ಬಳಕೆಯಾಗದ ಅನುದಾನವನ್ನು ಹಲವಾರು ಬ್ಯಾಂಕುಗಳಲ್ಲಿ ಠೇವಣಿ ಹೂಡಿರುವ ಬಗ್ಗೆ ಸಮಗ್ರವಾಗಿ ತನಿಖೆ ನಡೆಸುವ ಸಲುವಾಗಿ ಮಹಾತ್ಮಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಯ ಕಾರ್ಯನಿರ್ವಾಹಕ ನಿರ್ದೇಶಕರ ಅಧ್ಯಕ್ಷತೆಯಲ್ಲಿ

ರಚಿಸಿರುವ ಸಮಿತಿಯು, ತನ್ನ ಅಂತಿಮ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು, ಸದರಿ ವರದಿಯನ್ನಾಧರಿಸಿ ಮುಂದಿನ ಕ್ರಮ ಪರಿಶೀಲನೆಯಲ್ಲಿರುತ್ತದೆ.

ಮೇಲಿನ ವಿವರಣೆಯ ಅನುಸಾರ, ಮಾನ್ಯ ನ್ಯಾಯ ಮಂಡಳಿಯು ದಿನಾಂಕ 27-7-2015 ರಂದು ನೀಡಿರುವ ಆದೇಶವನ್ನು ಗಮನದಲ್ಲಿಟ್ಟುಕೊಂಡು ಶ್ರೀ ರಾಮಕೃಷ್ಣ, ಇವರ ಅಮಾನತ್ತನ್ನು ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸಲು ಸರ್ಕಾರವು ನಿರ್ಧರಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ: ಗ್ರಾಅಪ 217 ಪಬವ 2015, ಬೆಂಗಳೂರು, ದಿನಾಂಕ. 11.11.2015

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಸರ್ಕಾರವು ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಆಡಳಿತ ಶಾಖೆ) ಗೆ ಸೇರಿದ ಉಪ ಕಾರ್ಯದರ್ಶಿ(ಹಿರಿಯ ಶ್ರೇಣಿ) ವೃಂದದ ಅಧಿಕಾರಿಯಾದ ಶ್ರೀ ರಾಮಕೃಷ್ಣ, ಇವರ ವಿರುದ್ಧದ ಇಲಾಖಾ ವಿಚಾರಣೆ / ಕ್ರಿಮಿನಲ್ ಮೊಕದ್ದಮೆ ಬಾಕಿಯಿರಿಸಿ, ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತ್ತು ತೆರವುಗೊಳಿಸಿ, ಸೇವೆಗೆ ಪುನರ್ ಸ್ಥಾಪಿಸಿದೆ.

ಶ್ರೀ ರಾಮಕೃಷ್ಣ, ಉಪ ಕಾರ್ಯದರ್ಶಿ(ಹಿರಿಯ ಶ್ರೇಣಿ), ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಬೀದರ್ ಜಿಲ್ಲಾ ಪಂಚಾಯತ್‌ನಲ್ಲಿ ಖಾಲಿಯಿರುವ ಯೋಜನಾ ನಿರ್ದೇಶಕರು, (ಡಿ.ಆರ್.ಡಿ.ಎ. ಕೋಶ) ಹುದ್ದೆಗೆ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿದ್ದೇಶ್ ಪೋತ್ತಲಕಟ್ಟಿ)
ಸರ್ಕಾರದ ಉಪ ಕಾರ್ಯದರ್ಶಿ(ಆಡಳಿತ-2)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:-

1. ಮಹಾಲೇಖಪಾಲರು (ಲೆಕ್ಕಪತ್ರ 1 &2) / (ಆಡಿಟ್), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
3. ಎಲ್ಲಾ ನಿರ್ದೇಶಕರುಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೀದರ್.
5. ಸರ್ಕಾರದ ಅಧೀನ ಕಾರ್ಯದರ್ಶಿ, ಸಿ ಮತ್ತು ಆ ಸು ಇಲಾಖೆ(ಐಆರ್‌ಎಲ್‌ಎಂ).
6. ಸಂಬಂಧಿಸಿದ ಅಧಿಕಾರಿಗೆ.
7. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ಇವರ ಮಾಹಿತಿಗಾಗಿ.
8. ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಯವರಿಗೆ, ಗ್ರಾ.ಅ.ಪಂ.ರಾಜ್ ಇಲಾಖೆ.
9. ಗ್ರಾಮೀಣಾಭಿವೃದ್ದಿ ಮತ್ತು ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ಜಂಟಿ ಕಾರ್ಯದರ್ಶಿ, ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು.
10. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಕಂಪ್ಯೂಟರ್ ಸೆಲ್.